# ಕಲಿಕಾ ಚೇತರಿಕೆ– ಸಾಮಾನ್ಯ ಪ್ರಶ್ನೆಗಳು

## ತರಗತಿ ಪ್ರಕ್ರಿಯೆಗೆ ಸಂಬಂಧಿಸಿದ ಪ್ರಶ್ನೆಗಳು

**1)ಪ್ರತಿ ವರ್ಷ ನಡೆಯುತ್ತಿದ್ದ ಸೇತುಬಂಧಕ್ಕಿಂತ ಇದು ಹೇಗೆ ಭಿನ್ನವಾಗಿದೆ?**

ಕಲಿಕಾ ಚೇತರಿಕೆಯು ಕಲಿಕಾ ಅಂತರವನ್ನು ಸರಿದೂಗಿಸುವ ನಿಟ್ಟಿನಲ್ಲಿ ಆಯೋಜಿಸಿರುವ ಉಪಕ್ರಮವಾಗಿದೆ. ಇದು ಕಲಿಕೆಯಲ್ಲಿ ಉಂಟಾಗಿರುವ ನಷ್ಟವನ್ನು ತುಂಬುವುದಲ್ಲದೆ ಕಲಿಕೆಯನ್ನು ಕಲಿಕಾಫಲಗಳ ಆಧಾರದ ಮೇಲೆ ವ್ಯವಸ್ಥಿತವಾಗಿ ಬೋಧಿಸಲು ಮಾಡಿರುವ ಪ್ರಯತ್ನವಾಗಿದೆ. ಆದ್ದರಿಂದ ಇದು ಇಡೀ ವರ್ಷ ನಡೆಯುವ ಪ್ರಕ್ರಿಯೆಯಾಗಿದೆ. ಈ ಪ್ರಕ್ರಿಯೆಯು ಕಲಿಕಾ ನಷ್ಟವನ್ನು ಭರಿಸುವುದು, ಹೊಸ ಕಲಿಕೆಯನ್ನು ಸಾಧಿಸುವುದು ಮತ್ತು ಮೌಲ್ಯಮಾಪನ ಈ ಎಲ್ಲಾ ಅಂಶಗಳನ್ನು ಒಳಗೊಂಡಿದೆ.

**2) ಕಲಿಕಾ ಚೇತರಿಕೆಯ ಉಪಕ್ರಮವನ್ನು ಕೇವಲ ಸರ್ಕಾರಿ ಶಾಲೆಗಳಲ್ಲಿ ಮಾತ್ರ ಏಕೆ ಅಳವಡಿಸಿಕೊಳ್ಳಲಾಗುತ್ತಿದೆ?**

ನಮ್ಮ ರಾಜ್ಯದಲ್ಲಿ ಶಾಲೆ ಮುಚ್ಚಿದ ಕಾರಣದಿಂದಾದ ಕಲಿಕಾ ನಷ್ಟವು ಹೆಚ್ಚಾಗಿ ಕಂಡುಬಂದಿದೆ. ವರ್ಚುವಲ್ ಕಲಿಕಾ ಮಾಧ್ಯಮಕ್ಕೆ ಸೌಲಭ್ಯಗಳ ಕೊರತೆ, ನೆಟ್‌ವರ್ಕ್ ಕೊರತೆ ಮತ್ತು ಮೊಬೈಲ್ ಹಾಗೂ ಇತರೆ ಸಾಧನ ಸಲಕರಣೆಗಳ ಕೊರತೆಯಿಂದಾಗಿ ಸಾಕಷ್ಟು ಸರ್ಕಾರಿ ಶಾಲೆಯ ಮಕ್ಕಳು ದೂರ ಶಿಕ್ಷಣದಿಂದ ವಂಚಿತರಾಗಿದ್ದಾರೆ. ಆದಕಾರಣ ಸರ್ಕಾರವು ಜವಾಬ್ದಾರಿಯುತವಾಗಿ ಈ ಕಾರ್ಯಕ್ರಮವನ್ನು ಸರ್ಕಾರಿ ಶಾಲೆಗಳಲ್ಲಿ ಅಳವಡಿಸಿಕೊಳ್ಳಲು ತೀರ್ಮಾನಿಸಿದೆ. ಆದಾಗ್ಯೂ ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳು ಕಲಿಕಾ ಚೇತರಿಕೆಯನ್ನು ತಮ್ಮ ಅಗತ್ಯಾನುಸಾರವಾಗಿ ಅಳವಡಿಸಿಕೊಳ್ಳಲು ಸೂಚಿಸಲಾಗಿದೆ. ಅವರು ಯಾವುದೇ ಸಂದರ್ಭದಲ್ಲಿಯೂ ಕೂಡ ಇಲಾಖೆಯನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿಯನ್ನು ತೆಗೆದುಕೊಳ್ಳಲು ಪ್ರೇರೇಪಿಸಲಾಗಿದೆ.

**3) ಶಿಕ್ಷಕರು ಪಾಠಯೋಜನೆಯನ್ನು ಮಾಡಿಕೊಳ್ಳಬೇಕೆ? ಹೌದಾದರೆ ಹೇಗೆ ಮಾಡಿಕೊಳ್ಳಬೇಕು?**

ಪಾಠಯೋಜನೆಯು ಶಿಕ್ಷಕರು ಪಾಠವನ್ನು ಹೇಗೆ ಮಾಡಬೇಕೆಂಬುದರ ಮಾರ್ಗಸೂಚಿ. ಶಿಕ್ಷಕರ ಕೈಪಿಡಿಯು ಕಲಿಕಾ ಫಲಗಳನ್ನಾಧರಿಸಿ ಪಾಠ ಮಾಡುವ ಪ್ರಕ್ರಿಯೆಯನ್ನು ವಿವರಿಸುತ್ತದೆ. ಆದಾಗ್ಯೂ ಶಿಕ್ಷಕರು ತಮ್ಮದೇ ಆದ ಪಾಠಯೋಜನೆಯನ್ನು ಕಲಿಕಾಫಲಗಳ ಆಧಾರದ ಮೇಲೆ ತಮ್ಮ ತರಗತಿಯ ಮಕ್ಕಳಿಗನುಗುಣವಾಗಿ ತಯಾರಿಸಿಕೊಳ್ಳಲು ಪ್ರೇರೇಪಿಸಲಾಗಿದೆ.

**4) ಕಲಿಕಾ ಚೇತರಿಕೆ ಸಂದರ್ಭದಲ್ಲಿ ಪಠ್ಯಪುಸ್ತಕಗಳನ್ನು ಹೇಗೆ ಬಳಸಿಕೊಳ್ಳಬೇಕು?**

ಪಠ್ಯಪುಸ್ತಕಗಳ ಉಲ್ಲೇಖಗಳನ್ನು ಕಲಿಕಾ ಫಲಗಳ ಆಧಾರದ ಮೇಲೆ ಶಿಕ್ಷಕರ ಕೈಪಿಡಿಯಲ್ಲಿ ನೀಡಲಾಗಿದೆ. ಆದ್ದರಿಂದ ಶಿಕ್ಷಕರು ತರಗತಿಗೆ ಮುಂಚೆ ಶಿಕ್ಷಕರ ಕೈಪಿಡಿಯನ್ನು ಓದಿ ಅಗತ್ಯಾನುಸಾರವಾಗಿ ಪ್ರತೀ ವಿಷಯದಲ್ಲಿ ಪಠ್ಯಪುಸ್ತಕಗಳನ್ನು ಅಗತ್ಯವಿದ್ದಲ್ಲಿ ಕಲಿಕಾಹಾಳೆಗಳಿಗೆ ಪೂರಕವಾಗಿ ಬಳಸಲು ಪ್ರೇರೇಪಿಸಲಾಗಿದೆ.

**5) ಕಲಿಕಾಹಾಳೆ ಮತ್ತು ಅಭ್ಯಾಸ ಹಾಳೆಗಳಿಗಿರುವ ವ್ಯತ್ಯಾಸವೇನು?**

ಕಲಿಕಾ ಹಾಳೆಯನ್ನು ಕೊಟ್ಟಿರುವ ಪುಸ್ತಕದಿಂದ ಹರಿದು ಬೇರ್ಪಡಿಸಬಹುದಾಗಿದೆ. ಇದು ಮೌಲ್ಯಮಾಪನ ಮತ್ತು ಹಿಮ್ಮಾಹಿತಿ ಹೀಗೆ ಹಲವು ಉದ್ದೇಶಗಳಿಗೆ ಬಳಸಬಹುದಾಗಿದೆ. ಇದು ಮಕ್ಕಳ ಕೃತಿ ಸಂಪುಟ ತಯಾರಿಸಲು ಅನುಕೂಲ ಮಾಡುತ್ತದೆ. ಅಭ್ಯಾಸ ಹಾಳೆಯ ಬಳಕೆಯು ಅಭ್ಯಾಸ ಮತ್ತು ಮೌಲ್ಯಮಾಪನಕ್ಕೆ ಮಾತ್ರ ಸೀಮಿತವಾಗಿರುತ್ತದೆ.

**6) ಕಲಿಕಾ ಚೇತರಿಕೆ ಅಳವಡಿಸಿಕೊಂಡಾದ ಮೇಲೂ ಪ್ರತೀ ಅವಧಿಯು 45 ನಿಮಿಷ ಇರುತ್ತದೆಯೇ?**

ಹೌದು. ಕಲಿಕಾ ಚೇತರಿಕೆ ಅಳವಡಿಸಿಕೊಂಡಾದ ಮೇಲೂ ಪ್ರತೀ ಅವಧಿಯು 45 ನಿಮಿಷ ಇರುತ್ತದೆ.

**ಮೌಲ್ಯಾಂಕನ/ಮೌಲ್ಯಮಾಪನಕ್ಕೆ ಸಂಬಂಧಿಸಿದ ಪ್ರಶ್ನೆಗಳು**

7) **ಮಕ್ಕಳ ಸ್ತರಗಳನ್ನು SATS ನಲ್ಲಿ ಗ್ರೇಡ್ ಗಳಾಗಿ ಪರಿವರ್ತಿಸುವುದು ಹೇಗೆ?**

SATS ನಲ್ಲಿ ಎಂಟ್ರಿ ಮಾಡುವುದು ಆಡಳಿತಾತ್ಮಕವಾಗಿ ಅನಿವಾರ್ಯ. ಇದನ್ನು ಯಾವ ರೀತಿ ಮಾಡಬೇಕೆಂಬುದರ ಮಾಹಿತಿಯನ್ನು ಸುತ್ತೋಲೆಯ ಮೂಲಕ ಇಲಾಖೆಯು ಎಲ್ಲಾ ಶಿಕ್ಷಕರಿಗೂ ಸದ್ಯದಲ್ಲೇ ತಿಳಿಸಿಕೊಡುತ್ತದೆ.

8) **ಪಠ್ಯಪುಸ್ತಕದಲ್ಲಿರುವ ಕಲಿಕಾಫಲಗಳು ಮತ್ತು ಕಲಿಕಾ ಚೇತರಿಕೆಯಲ್ಲಿ ಅಳವಡಿಸಿಕೊಂಡಿರುವ ಕಲಿಕಾ ಫಲಗಳು ಬೇರೆ ಬೇರೆಯಾಗಿವೆ. ಇವುಗಳಲ್ಲಿ ಮೌಲ್ಯಮಾಪನದ ಉದ್ದೇಶದ ಹಿನ್ನೆಲೆಯಲ್ಲಿ ಯಾವುದನ್ನು ಪರಿಗಣಿಸಬೇಕು?**

ಪಠ್ಯಪುಸ್ತಕದಲ್ಲಿರುವ ಕಲಿಕಾಫಲಗಳು ಮತ್ತು ಕಲಿಕಾ ಚೇತರಿಕೆಯಲ್ಲಿ ಅಳವಡಿಸಿಕೊಂಡಿರುವ ಕಲಿಕಾ ಫಲಗಳು ಬೇರೆ ಬೇರೆಯಲ್ಲ.

ಕೋವಿಡ್ 19 ರಿಂದಾಗಿ ಹಿಂದಿನ ಎರಡು ಶೈಕ್ಷಣಿಕ ವರ್ಷಗಳಲ್ಲಿ ವಿದ್ಯಾರ್ಥಿಗಳು ಪೂರ್ಣಪ್ರಮಾಣದಲ್ಲಿ ಕಲಿಕಾ ಸಾಮರ್ಥ್ಯಗಳನ್ನು ಗಳಿಸಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಹಾಗಾಗಿ ಹಿಂದಿನ ಎರಡು ವರ್ಷಗಳಲ್ಲಿ ಗಳಿಸಿಕೊಳ್ಳಲೇಬೇಕಾದ ಅತ್ಯಗತ್ಯ ಕಲಿವಿನ ಫಲಗಳು ಮತ್ತು ಪ್ರಸಕ್ತ ಶೈಕ್ಷಣಿಕ ವರ್ಷದ ಪ್ರಮುಖ ಕಲಿಕಾ ಫಲಗಳೊಂದಿಗೆ ಕಲಿಕೆಯನ್ನು ಸಾಧಿಸುವ ಉದ್ದೇಶದೊಂದಿಗೆ ಕಲಿಕಾ ಚೇತರಿಕೆ ಉಪಕ್ರಮವನ್ನು ಅನುಷ್ಠಾನಿಸಲಾಗುತ್ತಿರುವುದರಿಂದ ಕಲಿಕಾ ಹಾಳೆ ಹಾಗೂ ಶಿಕ್ಷಕರ ಕೈಪಿಡಿಗಳಲ್ಲಿರುವ ಕಲಿಕಾಫಲಗಳನ್ನೇ ಮೌಲ್ಯಮಾಪನದ ಉದ್ದೇಶದ ಹಿನ್ನೆಲೆಯಲ್ಲಿ ಪರಿಗಣಿಸಬೇಕಾಗುತ್ತದೆ.

9) **ವಿಷಯವಾರು ಮತ್ತು ತರಗತಿವಾರು ಸಾಮಾನ್ಯವಾದ ಪ್ರಶ್ನೆಪತ್ರಿಕೆ ದೊರೆಯುತ್ತದೆಯೇ?**

ಇಲ್ಲ, ಶಿಕ್ಷಕರು ಶಾಲಾಹಂತದಲ್ಲಿ ತರಗತಿ ಸಂದರ್ಭಕ್ಕನುಸಾರವಾಗಿ ಪ್ರಶ್ನೆಪತ್ರಿಕೆಗಳನ್ನು ಮತ್ತು ಮೌಲ್ಯಮಾಪನ ಪ್ರಕ್ರಿಯೆಗಳನ್ನು ಅಳವಡಿಸಿಕೊಳ್ಳಲು ಪ್ರೇರೇಪಿಸಲಾಗಿದೆ.

**10) ಯಾವ ದಾಖಲೆಗಳನ್ನು/ಆಧಾರಗಳನ್ನು ನಿರ್ವಹಿಸಬೇಕು?**

ಮಕ್ಕಳ ಕಲಿಕಾ ಪ್ರಗತಿಯನ್ನು ಬಿಂಬಿಸುವ ನೈದಾನಿಕ ಪರೀಕ್ಷೆಗಳ ಫಲಿತಗಳು, ಕಲಿಕಾ ಹಾಳೆಗಳಿಂದ ಕೂಡಿದ ವಿದ್ಯಾರ್ಥಿಯ ಕೃತಿಸಂಪುಟ ಮತ್ತು ಉಪಾಖ್ಯಾನ ಪುರಾವೆಗಳನ್ನು ಕಲಿಕಾ ಚೇತರಿಕೆಯ ಸಂದರ್ಭದಲ್ಲಿ ನಿರ್ವಹಿಸಬೇಕು. ಯಾವುದೇ ಸಂಶಯಗಳಿದ್ದಲ್ಲಿ ಇಲಾಖೆಯನ್ನು ಸಂಪರ್ಕಿಸಿರಿ.

**11) ನೈದಾನಿಕ ಪರೀಕ್ಷೆ ಮತ್ತು ಪೂರ್ವ ಪರೀಕ್ಷೆಗಳಿಗಿರುವ ವ್ಯತ್ಯಾಸಗಳೇನು?**

ನೈದಾನಿಕ ಪರೀಕ್ಷೆಯು ಮಕ್ಕಳ ಪೂರ್ವ ಕಲಿಕಾ ಜ್ಞಾನವನ್ನು ತಿಳಿಯಲು ಇರುವ ಸಾಧನವಾಗಿದೆ. ಇದು ಮಕ್ಕಳ ಅಗತ್ಯವನ್ನು ತಿಳಿದುಕೊಳ್ಳುವುದರ ಜೊತೆಗೆ ಅದನ್ನು ಪೂರೈಸಲು ಯಾವ ರೀತಿ ಯೋಜನೆ ಹಾಕಿಕೊಳ್ಳಬೇಕು ಎಂಬುದನ್ನು ನಿರ್ಧರಿಸಲು ಸಹಾಯ ಮಾಡುತ್ತದೆ.

ಪೂರ್ವ ಪರೀಕ್ಷೆಯು ಈ ರೀತಿಯಾದ ಸಮಗ್ರ ಮಾಹಿತಿಯನ್ನು ನೀಡುವುದಿಲ್ಲ.

## ಸಾಮಾನ್ಯ ಪ್ರಶ್ನೆಗಳು

**12) ಎಲ್ಲಾ ಪೋಷಕರು ಮತ್ತು ಅಧಿಕಾರಿ ವರ್ಗದವರಿಗೆ ಕಲಿಕಾಚೇತರಿಕೆಯ ಮಾಹಿತಿಯನ್ನು ನೀಡಲಾಗುತ್ತದೆಯೇ?**

ಇಲಾಖೆಯು ಎಲ್ಲಾ ಭಾಗಿದಾರರಿಗೂ ಕಲಿಕಾಚೇತರಿಕೆಯ ಬಗ್ಗೆ ಮಾಹಿತಿ ನೀಡಲು ಹಲವಾರು ( **ಇಲಾಖೆಯ ಅಧಿಕಾರಿಗಳಿಗೆ ಹಾಗೂ ಶಿಕ್ಷಕ ಸಂಘದ ಪದಾಧಿಕಾರಿಗಳಿಗೆ ಕಾರ್ಯಾಗಾರ, ವಿಡಿಯೋಕಾನ್ಫರೆನ್ಸ್,ಟೆಲಿಕಾನ್ಫರೆನ್ಸ್)** ಅಗತ್ಯಕ್ರಮಗಳನ್ನು ಅನುಸರಿಸಿದೆ.

ಶಾಲಾ ಪ್ರಾರಂಭೋತ್ಸವ ಸಂದರ್ಭದಲ್ಲಿ ಪೋಷಕರನ್ನು ಹಾಗೂ ಎಸ್.ಡಿ.ಎಂ.ಸಿ ಸಮಿತಿಯ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರನ್ನು ಆಹ್ವಾನಿಸಿ ಉಪಕ್ರಮದ ಅರಿವು ಮೂಡಿಸಿ ಅನುಷ್ಠಾನಕ್ಕಾಗಿ ಸಹಕಾರ ಕೋರುವ ಮಾದರಿ ಪತ್ರವನ್ನು ಸಿದ್ಧಪಡಿಸಿದ್ದು,ರಾಜ್ಯದ ಎಲ್ಲಾ 47702 ಸರ್ಕಾರಿ ಶಾಲೆಗಳಿಗೂ ಉಪನಿರ್ದೇಶಕರು ( ಆಡಳಿತ) ಹಾಗೂ ಉಪನಿರ್ದೇಶಕರು ( ಅಭಿವೃದ್ಧಿ) ರವರು ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ ಎಲ್ಲಾ ಸರ್ಕಾರಿ ಶಾಲೆಗಳ ಮುಖ್ಯಸ್ಥರಿಗೆ ತಲುಪಿಸುವಂತೆ ಕ್ರಮವಹಿಸಿದೆ.

**13) ಕಲಿಕಾಚೇತರಿಕೆಯು ಈ ವರ್ಷ ಪೂರ್ತಿ ನಡೆಯುತ್ತದೆಯೇ?**

ಹೌದು, ಕಲಿಕಾ ಅಂತರವನ್ನು ಸರಿದೂಗಿಸಿ ಪ್ರಸಕ್ತ ತರಗತಿಯ ಅಗತ್ಯ ಕಲಿಕಾಫಲಗಳನ್ನು ಸಾಧಿಸಲು 2022–23ರ ಶೈಕ್ಷಣಿಕ ವರ್ಷ ಪೂರ್ತಿ ಕಲಿಕಾಚೇತರಿಕೆಯನ್ನು ಅಳವಡಿಸಿಕೊಳ್ಳಲಾಗುತ್ತಿದ್ದು ಈ ವರ್ಷವನ್ನು **'ಕಲಿಕಾಚೇತರಿಕೆ ವರ್ಷ'**ಎಂಬುದಾಗಿ ಘೋಷಿಸಲಾಗಿದೆ.

**14) ಕಲಿಕಾ ಹಾಳೆಗಳಲ್ಲಿ ಕೊಟ್ಟಿರುವುದಕ್ಕಿಂತ ಹೆಚ್ಚಿನ ಚಟುವಟಿಕೆಗಳನ್ನು ಶಿಕ್ಷಕರು ಕೈಗೊಳ್ಳಬಹುದೇ?**

ಕಲಿಕಾಹಾಳೆಗಳಲ್ಲಿ ಮತ್ತು ಶಿಕ್ಷಕರ ಕೈಪಿಡಿಗಳಲ್ಲಿ ಕೊಟ್ಟಿರುವ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಸಾಧಿಸಿದ ನಂತರವಷ್ಟೇ ಹೆಚ್ಚಿನ ಚಟುವಟಿಕೆಗಳನ್ನು ಕೈಗೊಳ್ಳಲು ಪ್ರೋತ್ಸಾಹಿಸಲಾಗಿದೆ.

**15) ಪ್ರೌಢಶಾಲಾ ವಿದ್ಯಾರ್ಥಿಗಳು NTSE ಮತ್ತು ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕಲಿಕಾಚೇತರಿಕೆಯ ಸಂದರ್ಭದಲ್ಲಿ ಯಾವ ರೀತಿ ತಯಾರಿ ಮಾಡಿಕೊಳ್ಳಬಹುದು?**

ಕಲಿಕಾಚೇತರಿಕೆಯು ಶಾಲೆಗಳನ್ನು ಪೂರ್ಣವಾಗಿ ತೆರೆಯಲು ಸಾಧ್ಯವಾಗದ ಪರಿಣಾಮವಾಗಿ ಆದ ಕಲಿಕಾ ನಷ್ಟವನ್ನು ಭರಿಸಲು ಕಂಡುಕೊಂಡಿರುವ ಉಪಕ್ರಮವಾಗಿದೆ. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯಲು ಇಚ್ಛಿಸಿರುವ ವಿದ್ಯಾರ್ಥಿಗಳು ಕಲಿಕಾ ಚೇತರಿಕೆಯಲ್ಲಿ ಸೂಚಿಸಿರುವ ಕಲಿಕೆಯನ್ನು ಸಾಧಿಸಿದ ನಂತರ ತಮ್ಮದೇ ಹಂತದಲ್ಲಿ ವೈಯಕ್ತಿಕವಾಗಿ ತಯಾರಿ ಮಾಡಿಕೊಳ್ಳಬಹುದು.ಹಾಗೂ ಶಿಕ್ಷಕರ ಸಹಾಯವನ್ನು ಪಡೆಯಬಹುದಾಗಿದೆ.

**16) ಸಕಾರಾತ್ಮಕ/ರಚನಾತ್ಮಕ ಹಿಮ್ಮಾಹಿತಿಯನ್ನು ಕೊಡುವುದು ಹೇಗೆ? ಉದಾಹರಣೆ ಕೊಡಿ.**

ರಚನಾತ್ಮಕ ಹಿಮ್ಮಾಹಿತಿಯು ಮಕ್ಕಳಲ್ಲಿ ಕಲಿಕಾಪ್ರಗತಿಯನ್ನು ಉಂಟುಮಾಡಬೇಕು. ಮತ್ತು ಶಿಕ್ಷಕರಿಗೆ ವಿದ್ಯಾರ್ಥಿಗಳ ಬಗ್ಗೆ ಸೂಕ್ತವಾದ ಮಾಹಿತಿ ನೀಡುವಂತಿರಬೇಕು. ನಕಾರಾತ್ಮಕ ಟೀಕೆಗಳನ್ನು ಬಳಸದೇ ಇರುವಂತೆ ಎಚ್ಚರಿಕೆ ವಹಿಸಬೇಕು.

ಉದಾಹರಣೆಗಳು

ಉದಾ–1: ವಿದ್ಯಾರ್ಥಿಯು ಚಟುವಟಿಕೆಗಳನ್ನು ಸಂಪೂರ್ಣಗೊಳಿಸಲು ಪ್ರಯತ್ನಿಸಿದ್ದಾನೆ. ನಿಗದಿತ ಸಾಮರ್ಥ್ಯಗಳನ್ನು ಗಳಿಸಲು ಇನ್ನೂ ಹೆಚ್ಚಿನ ಅಭ್ಯಾಸದ ಅಗತ್ಯವಿದೆ. ಈ ಚಟುವಟಿಕೆಗೆ ಮುನ್ನ ಬೇರೆ ಸುಲಭವಾದ ಚಟುವಟಿಕೆಗಳನ್ನು ಮಾಡುವುದರಿಂದ ಮಗು ಈ ಸಾಮರ್ಥ್ಯವನ್ನು ಗಳಿಸಲು ನೆರವಾಗುತ್ತದೆ.

ಉದಾ–2: ವಿದ್ಯಾರ್ಥಿಗೆ ಈ ಚಟುವಟಿಕೆಗಳು ಸವಾಲಿನದ್ದಾಗಿದೆ. ಹಾಗಾಗಿ ಬೇರೆ ಸುಲಭವಾದ ಅಭ್ಯಾಸ ಚಟುವಟಿಕೆಗಳನ್ನು ಮಾಡಲು ಸೂಚಿಸಿದ್ದೇನೆ.

ಉದಾ–3: ವಿದ್ಯಾರ್ಥಿಯು ಈ ಕಲಿಕಾಫಲವನ್ನು ಸಮರ್ಥವಾಗಿ ಅರ್ಥಮಾಡಿಕೊಂಡಿದ್ದಾನೆ. ಆದ್ದರಿಂದ ಮುಂದಿನ ಸಾಮರ್ಥ್ಯಕ್ಕೆ ಹೋಗಬಹುದು.

**17) ಒಬ್ಬ ಶಿಕ್ಷಕರು ಒಂದಕ್ಕಿಂತ ಹೆಚ್ಚಿನ ಕಲಿಕಾ ಚೇತರಿಕೆ ತರಬೇತಿಗೆ ಹೋಗಬೇಕೆ?**
**( ಒಬ್ಬ ಶಿಕ್ಷಕರು ಹೆಚ್ಚಿನ ವಿಷಯಗಳನ್ನು ಪಾಠ ಬೋಧಿಸುತ್ತಿರುವ ಸಂದರ್ಭದಲ್ಲಿ)**

ಕಲಿಕಾ ಚೇತರಿಕೆಯ ಮೂಲಭೂತ ತತ್ವವು ಎಲ್ಲಾ ವಿಷಯಗಳಲ್ಲಿಯೂ ಒಂದೇ ಆಗಿರುತ್ತದೆ.ಒಬ್ಬ ಶಿಕ್ಷಕರು ಕಲಿಕಾ ಚೇತರಿಕೆಯ ಒಂದು ವಿಷಯದ ಬಗ್ಗೆ ತರಬೇತಿ ಪಡೆದರೆ,ಅದೇ ತತ್ವವನ್ನು ಬೋಧಿಸುತ್ತಿರುವ ಇತರ ವಿಷಯಗಳಿಗೂ ಅಳವಡಿಸಿಕೊಳ್ಳಬಹುದಾಗಿದೆ.ಆದ್ದರಿಂದ ಪ್ರತಿಯೊಬ್ಬ ಶಿಕ್ಷಕರೂ ಯಾವುದಾದರೊಂದು ವಿಷಯದಲ್ಲಿ ಈ ತರಬೇತಿಯನ್ನು ಪಡೆಯುವುದು ಅನಿವಾರ್ಯವಾಗಿದೆ. ಹಾಗಾಗಿ ಬೋಧಿಸುತ್ತಿರುವ ಎಲ್ಲಾ ವಿಷಯಗಳಲ್ಲೂ ತರಬೇತಿ ಪಡೆಯುವ ಅವಶ್ಯಕತೆ ಇರುವುದಿಲ್ಲ.